- -

**ಓ.ಎಸ್. ಸಂಖ್ಯೆಃ 168/2016**

**ಪಿ.ಡಬ್ಲ್ಯೂಃ 5**

ದಿನಾಂಕಃ 22.08.2025 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

**ಪಾಟೀ ಸವಾಲು ಪ್ರತಿವಾದಿ ನಂಬರ್ 1 ರಿಂದ 3 ರವರ ಪರ ಶ್ರೀಃ ಜಿ.ಬಿ.ಆರ್ ವಕೀಲರಿಂದ**

1. ದಾವಾ ಆಸ್ತಿಯ ಪೂರ್ವ ದಿಕ್ಕಿನಲ್ಲಿ ನಮ್ಮ ಜಮೀನು ಇರುತ್ತದೆ. ನಾನು ದಾನನಗೌಡ ರವರನ್ನು ನೋಡಿದ್ದೇನೆ. ಹಳ್ಳಿ ಪಂಪನಗೌಡರವರನ್ನು ನಾನು ನೋಡಿಲ್ಲ. ವಾದಿಗಳು ಯಾವ ಕಾರಣಕ್ಕೆ ದಾವೆಯನ್ನು ಸಲ್ಲಿಸಿದ್ದಾರೆ ಎಂದು ನನಗೆ ಗೊತ್ತಿಲ್ಲ. ದಿಃ13-03-1978 ರಲ್ಲಿ ದಾನನಗೌಡರವರು ದಾವಾ ಆಸ್ತಿಗಳನ್ನು ಹಳ್ಳಿ ಪಂಪನಗೌಡ ರವರಿಗೆ ನೊಂದಾಯಿತ ಕ್ರಯ ಪತ್ರದ ಮೂಲಕ ಮಾರಾಟ ಮಾಡಿರುವ ವಿಚಾರ ನನಗೆ ಗೊತ್ತಿಲ್ಲ. ದಾವಾ ಆಸ್ತಿಗಳಿಗೆ ಸಂಬಂಧಪಟ್ಟ ಯಾವುದೇ ದಾಖಲೆಗಳನ್ನು ನಾನು ನೋಡಿಲ್ಲ. ಹಳ್ಳಿ ಪಂಪನಗೌಡರವರ 1978 ರಲ್ಲಿ ದಾವಾ ಆಸ್ತಿಯನ್ನು ಖರೀದಿ ಪಡೆದು ಸ್ವಾಧೀನದಲ್ಲಿದ್ದರು ಎಂದರೆ ಸಾಕ್ಷಿಯು ತಾನು ನೋಡಿಲ್ಲ ಎಂದು ನುಡಿಯುತ್ತಾರೆ.

2. ದಾವಾ ಆಸ್ತಿಗಳು ವಾದಿಯರ ಪಿತ್ರಾರ್ಜಿತ ಆಸ್ತಿಗಳಾಗಿದ್ದು, ವಾದಿಯರು ಸ್ವಾಧೀನದಲ್ಲಿ ಇರುವ ಬಗ್ಗೆ ದಾಖೆಗಳನ್ನು ನಾನು ನೋಡಿಲ್ಲ. ದಾವಾ ಆಸ್ತಿಗಳ ಚೆಕ್ಕು ಬಂದಿ ನನಗೆ ಹೇಳಲು ಬರುವುದಿಲ್ಲ. ಪ್ರತಿವಾದಿಗಳು ದಾವಾ ಆಸ್ತಿಗಳ ಸ್ವಾಧೀನದಲ್ಲಿ ಇರುವ ವಿಚಾರ ವಾದಿಯವರ ಮಾತು ಕೇಳಿ ಸುಳ್ಳು ಸಾಕ್ಷವನ್ನು ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ದಾವಾ ಆಸ್ತಿಯ ಪಶ್ಚಿಮ ದಿಕ್ಕಿಗೆ ನನ್ನ ಜಮೀನು ಇದೆ ಎಂದು ಸುಳ್ಳು ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು-ವಿಚಾರಣೆ ಇಲ್ಲ.**

ನನ್ನ ಹೇಳಿಕೆಯ ಪ್ರಕಾರ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಗಿದೆ.

ಓ.ಹೇ.ಕೆ. ಸರಿ ಇದೆ.

**ಸಿವಿಲ್ ಮತ್ತು ಜೆ.ಎಮ್.ಎಫ್.ಸಿ.**
**ನ್ಯಾಯಾಧೀಶರು, ಸಿರುಗುಪ್ಪ**